ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ          ದಿನಾಂಕ : DATE : 18/11/20

# 2 ಹಂತಗಳಲ್ಲಿ ಗ್ರಾಪಂ ಚುನಾವಣೆ

## ಜಿಲ್ಲಾಡಳಿತಗಳ ಸಲಹೆಗೆ ಆಯೋಗ ಒಪ್ಪಿಗೆ ಸಕಲ ಸಿದ್ಧತೆ ಮಾಡಲು ಡೀಸಿಗಳಿಗೆ ಸೂಚನೆ

• ಕನ್ನಡಪ್ರಭ ವಾರ್ತೆ ಬೆಂಗಳೂರು

ಗ್ರಾಮ ಮತ ಸಂಗ್ರಾಮಕ್ಕೆ ರಾಜ್ಯವನ್ನು ಅಣಿಗೊಳಿಸಲು ಮುಂದಾಗಿರುವ ಚುನಾವಣಾ ಆಯೋಗವು ರಾಜ್ಯದ 5300 ಗ್ರಾಮ ಪಂಚಾಯಿತಿಗಳಿಗೆ ಎರಡು ಹಂತದಲ್ಲಿ ಚುನಾವಣೆ ನಡೆಸಲು ತೀರ್ಮಾನಿಸಿದೆ. ಈ ಕುರಿತು ಅಗತ್ಯ ಸಿದ್ಧತೆ ನಡೆಸುವಂತೆ ರಾಜ್ಯದ ಎಲ್ಲ ಜಿಲ್ಲಾಡಳಿತಕ್ಕೆ ಮಂಗಳವಾರ ಸೂಚನೆ ನೀಡಿದೆ. ▶7



ಗ್ರಾಪಂ ಚುನಾವಣೆ ಸಂಬಂಧ ಜಿಲ್ಲೆಗಳ ಡೀಸಿ, ಎಸ್‌ಪಿ, ಸಿಇಒ ಜತೆ ಸಭೆ ನಡೆಸಿ, ಸಿದ್ಧತೆ ಬಗ್ಗೆ ಚರ್ಚಿಸಲಾಗಿದೆ. 2 ಹಂತದಲ್ಲಿ ಚುನಾವಣೆ ನಡೆಸಲು ಅಭಿಪ್ರಾಯ ವ್ಯಕ್ತವಾಗಿದ್ದು, ಮತ್ತೊಮ್ಮೆ ಪರಿಶೀಲಿಸಿ ಅದೇ ರೀತಿ ನಡೆಸಲು ಕ್ರಮ ಕೈಗೊಳ್ಳಲಾಗುವುದು.

• ಬಿ.ಬಸವರಾಜು ರಾಜ್ಯ ಚುನಾವಣಾ ಆಯುಕ್ತ

# 2 ಹಂತಗಳಲ್ಲಿ ಗ್ರಾಮ ಪಂಚಾಯ್ತಿ ಚುನಾವಣೆ

◀ ಮೊದಲ ಪುಟದಿಂದ

ಬೆಂಗಳೂರು, ಮೈಸೂರು, ಕಲಬುರಗಿ, ಬೆಳಗಾವಿ ವಿಭಾಗಗಳೊಂದಿಗೆ ರಾಜ್ಯ ಚುನಾವಣಾ ಆಯೋಗದ ಆಯುಕ್ತ ಬಿ.ಬಸವರಾಜು ಅವರು ಮಂಗಳವಾರ ವಿಡಿಯೋ ಸಂವಾದ ನಡೆಸಿದರು. ಈ ವೇಳೆ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಜತೆ ವಿಸ್ತೃತವಾಗಿ ಚರ್ಚೆ ನಡೆಸಿದರು. ಕೋವಿಡ್ ಮತ್ತು ನೆರೆ ಹಿನ್ನೆಲೆಯಲ್ಲಿ ಅಲ್ಲಿನ ಪರಿಸ್ಥಿತಿ ಕುರಿತು ಸಮಾಲೋಚನೆ ನಡೆಸಿ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಸಲಹೆಗಳನ್ನು ಪಡೆದುಕೊಂಡರು.

ಕೋವಿಡ್-19 ಕಾರಣದಿಂದಾಗಿ ಎರಡು ಹಂತದಲ್ಲಿ ಚುನಾವಣೆ ನಡೆಸುವುದು ಸೂಕ್ತ ಎಂಬ ಅಭಿಪ್ರಾಯಗಳು ಸಭೆಯಲ್ಲಿ ವ್ಯಕ್ತವಾದವು. ಉಡುಪಿ ಜಿಲ್ಲೆ ಚಿಕ್ಕದಾದರೂ ಎರಡು ಹಂತದಲ್ಲಿ ನಡೆಸುವ ಬಗ್ಗೆ ಆಯುಕ್ತರಿಗೆ ಮನವರಿಕೆ ಮಾಡಿಕೊಟ್ಟಿತು. ಬಾಗಲಕೋಟೆ ಜಿಲ್ಲೆಯು ಒಂದೇ ಹಂತದಲ್ಲಿ ನಡೆಸುವ ಪ್ರಸ್ತಾಪವನ್ನು ಮುಂದಿಟ್ಟಿತು. ಆದರೆ, ಕೊರೋನಾ ಸಮಸ್ಯೆ ಇರುವ ಕಾರಣ ಹೆಚ್ಚಿನ ಶ್ರಮ ತೆಗೆದುಕೊಳ್ಳುವುದು ಬೇಡ. ಸುಗಮವಾಗಿ ಚುನಾವಣೆ ನಡೆಸಬೇಕಾಗಿರುವ ಹಿನ್ನೆಲೆಯಲ್ಲಿ ಎರಡು ಹಂತದಲ್ಲಿ ಚುನಾವಣೆ ನಡೆಸುವಂತೆ ಆಯುಕ್ತ ಬಸವರಾಜು ಅವರು ಸೂಚಿಸಿದರು.

ಯಾವುದೇ ಗೊಂದಲವಾಗದಂತೆ ಚುನಾವಣೆ ನಡೆಸಬೇಕಾಗಿದ್ದು, ಚುನಾವಣೆ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಬೇಕು. ಚುನಾವಣಾಧಿಕಾರಿ, ಸಹಾಯಕ ಚುನಾವಣಾಧಿಕಾರಿಯನ್ನು ನಿಯುಕ್ತಿಗೊಳಿಸಬೇಕು. ಮತಯಂತ್ರಗಳ ದುರಸ್ತಿಗೇನಿದ್ದರೆ ತಕ್ಷಣ ಮಾಡಿಸಿಕೊಳ್ಳಬೇಕು. ಚುನಾವಣೆ ಸಮೀಪವಿದ್ದಾಗ ದುರಸ್ತಿಗೆ ಮುಂದಾಗಬಾರದು ಕೊರೋನಾ ಇರುವ ಹಿನ್ನೆಲೆಯಲ್ಲಿ ಚುನಾವಣಾ ಸಿಬ್ಬಂದಿಗೆ ಹೆಚ್ಚಿನ ಕೆಲಸ ಇರುತ್ತದೆ. ಹೀಗಾಗಿ ಕೊನೆಯ ಹಂತದಲ್ಲಿ ಯಾವುದೇ ಕೆಲಸಗಳನ್ನಿಟ್ಟುಕೊಳ್ಳಬಾರದು. ಮೊದಲೇ ಸಮಸ್ಯೆಗಳನ್ನು ಬಗೆಹರಿಸಿ ಸಿದ್ಧತೆ ಕೈಗೊಳ್ಳಬೇಕು. ಆರೋಗ್ಯ ಇಲಾಖೆಯ ಅಧಿಕಾರಿಗಳ ಜತೆ ಚರ್ಚೆ ನಡೆಸಲಾಗಿದೆ. ಆರೋಗ್ಯ ಇಲಾಖೆಯು ಕೋವಿಡ್-19ರ ಮಾರ್ಗಸೂಚಿಗಳನ್ನು ಪಾಲನೆ ಮಾಡಿ ಚುನಾವಣೆ ನಡೆಸಬೇಕು ಎಂದು ಸೂಚಿಸಿದೆ ಎಂದು ಹೇಳಿದರು.